# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 177 |
| 2. | ಮಾನ್ಯ ಸದಸ್ಯರ ಹೆಸರು | ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | 01/02/2021 |
| 4. | ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಕಲ್ಯಾಣಕ್ಕಾಗಿ ಸರ್ಕಾರವು ರೂಪಿಸಿರುವ ಯೋಜನೆ/ ಕಾರ್ಯಕ್ರಮಗಳು ಯಾವುವು; (ಮಾಹಿತಿ ನೀಡುವುದು) | ಕಾರ್ಮಿಕ ಕಲ್ಯಾಣಕ್ಕಾಗಿ ಸರ್ಕಾರವು ಕಟ್ಟಡ ಮತ್ತು ಇತರೆ ನಿರ್ಮಾಣ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು 2006 ರಡಿಯಲ್ಲಿ ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗಾಗಿ ರೂಪಿತವಾದ 19 ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಮಂಡಳಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸೌಲಭ್ಯಗಳ ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.<br><br>ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ರಚಿಸಿರುತ್ತದೆ ಹಾಗೂ ಹಲವಾರು ಯೋಜನೆಗಳನ್ನು ರೂಪಿಸಿದ್ದು, ಈ ಮಂಡಳಿಯ ಮೂಲಕ ಜಾರಿಗೊಳಿಸುತ್ತಿದ್ದು, ವಿವರ ಈ ಕೆಳಕಂಡಂತಿದೆ:<br><br>(1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-** ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರು ಫಲಾನುಭವಿಗಳಾಗಿದ್ದು, ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>(ಅ) **ಅಪಘಾತ ಪರಿಹಾರ ಸೌಲಭ್ಯ:** ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ರೂ.2 ಲಕ್ಷದ ವರಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ. 1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br><br>(ಆ) **ಶೈಕ್ಷಣಿಕ ಧನ ಸಹಾಯ :** ಅಪಘಾತದ ಕಾರಣ ನಿಧನರಾದ ಹಾಗೂ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ. |

(ಇ) **ಸ್ಮಾರ್ಟ್ ಕಾರ್ಡ್ ಸೌಲಭ್ಯ:** ಯೋಜನೆಯ ಕುರಿತು ಫಲಾನುಭವಿಗಳಲ್ಲಿ ಜಾಗೃತಿ ಮೂಡಿಸಲು ಎಲ್ಲಾ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.

(ಈ) **ಶ್ರಮ ಸಮ್ಮಾನ ಪ್ರಶಸ್ತಿ :**

- ಪ್ರತಿ ವರ್ಷ ಸರ್ಕಾರದ ಆದೇಶದಂತೆ, 2020ರ ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ ತ್ರಿಚಕ್ರ ಹಾಗೂ ನಾಲ್ಕು ಚಕ್ರದ ವಾಹನ ಚಾಲಕರಿಗೆ ಪ್ರತಿ ಜಿಲ್ಲೆಗೆ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು ರಾಜ್ಯಾದಾದ್ಯಂತ 660 ಚಾಲಕರಿಗೆ **"ಶ್ರಮ ಸಮ್ಮಾನ ಪ್ರಶಸ್ತಿ"** ನೀಡಿ ಗೌರವಿಸಲಾಗುತ್ತಿದೆ.
- ಪ್ರಥಮ ಪ್ರಶಸ್ತಿಯು ರೂ. 15,000/-ಗಳ ಮೌಲ್ಯದ ಚಿನ್ನದ ಪದಕ, ದ್ವಿತೀಯ ಪ್ರಶಸ್ತಿಯು ರೂ. 10,000/-ದ ಮೌಲ್ಯದ ಬೆಳ್ಳಿ ಪದಕ ಹಾಗೂ ತೃತೀಯ ಪ್ರಶಸ್ತಿಯು ರೂ. 8,000/-ದ ಮೌಲ್ಯದ ಬೆಳ್ಳಿ ಪದಕ ಹೊಂದಿದ್ದು, ವಿಶೇಷ ಪುರಸ್ಕಾರವು ರೂ.1,000/-ಗಳ ನಗದು ಬಹುಮಾನ ಹಾಗೂ ಪ್ರಶಂಸಾಪತ್ರವನ್ನು ಹೊಂದಿರುತ್ತದೆ.

**(ಈ) ಅಪಘಾತ ಜೀವ ರಕ್ಷಕ:-** ಅಪಘಾತಕ್ಕೊಳಗಾದ ಗಾಯಾಳುಗಳನ್ನು ರಕ್ಷಿಸುವ ಸ್ವಯಂಸೇವಕರನ್ನು ಸೃಷ್ಟಿಸುವ ಉದ್ದೇಶದಿಂದ ಅಪಘಾತ ಜೀವರಕ್ಷಕ ಕಾರ್ಯಕ್ರಮದಡಿ ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿಯನ್ನು ನೀಡಿ ಅಪಘಾತ ಜೀವರಕ್ಷಕರನ್ನಾಗಿ ಸಜ್ಜಗೊಳಿಸಲಾಗುತ್ತಿದೆ.

**(2) <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u>**

**(ಅ) "ಸ್ಮಾರ್ಟ್ ಕಾರ್ಡ್":-** ಪ್ರಸ್ತುತ ಈ ಯೋಜನೆಯಡಿ 11 ಅಸಂಘಟಿತ ವಲಯಗಳಾದ **"ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"**ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.

**(ಆ) ಶ್ರಮ ಸಮ್ಮಾನ ಪ್ರಶಸ್ತಿ:**

- ಪ್ರತಿ ವರ್ಷ 2020ರ ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, 11 ಅಸಂಘಟಿತ ವರ್ಗಗಳಾದ **"ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"** ವಲಯಗಳಲ್ಲಿ ವಿಶೇಷ ಸಾಧನೆ ಮಾಡಿದ ಕಾರ್ಮಿಕರನ್ನು ಗುರುತಿಸಿ, ಪ್ರತಿಯೊಂದು ಜಿಲ್ಲೆಗೆ ಪ್ರತಿಯೊಂದು

ವರ್ಗಕ್ಕೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು 3630 ಕಾರ್ಮಿಕರಿಗೆ **"ಶ್ರಮ ಸಮ್ಮಾನ ಪ್ರಶಸ್ತಿ"** ನೀಡಿ ಗೌರವಿಸಲಾಗುತ್ತಿದೆ.

- ಪ್ರಥಮ ಪ್ರಶಸ್ತಿಯು ರೂ. 15,000/-ಗಳ ಮೌಲ್ಯದ ಚಿನ್ನದ ಪದಕ, ದ್ವಿತೀಯ ಪ್ರಶಸ್ತಿಯು ರೂ. 10,000/-ದ ಮೌಲ್ಯದ ಬೆಳ್ಳಿ ಪದಕ ಹಾಗೂ ತೃತೀಯ ಪ್ರಶಸ್ತಿಯು ರೂ. 8,000/-ದ ಮೌಲ್ಯದ ಬೆಳ್ಳಿ ಪದಕ ಹೊಂದಿದ್ದು, ವಿಶೇಷ ಪುರಸ್ಕಾರವು ರೂ.1,000/-ಗಳ ನಗದು ಬಹುಮಾನ ಹಾಗೂ ಪ್ರಶಂಸಾಪತ್ರವನ್ನು ಹೊಂದಿರುತ್ತದೆ.

**(ಇ) ಕಾರ್ಮಿಕ ಸೇವಾ ಕೇಂದ್ರ :-**

ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 9ರನ್ವಯ ಅಸಂಘಟಿತ ಕಾರ್ಮಿಕರಿಗೆ ಲಭ್ಯವಿರುವ ಎಲ್ಲಾ ಯೋಜನೆಗಳ ಕುರಿತು ಫಲಾನುಭಗಳಿಗೆ ಮಾಹಿತಿ ನೀಡಲು, ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಲು ಅವಶ್ಯಕವಿರುವ ದಾಖಲಾತಿಗಳನ್ನು ಸಿದ್ಧಪಡಿಸಲು ಹಾಗೂ ನಿಗದಿಪಡಿಸಿದ ಅರ್ಜಿ ನಮೂನೆಗಳನ್ನು ಭರ್ತಿ ಮಾಡಿ ಸಂಬಂಧಪಟ್ಟವರಿಗೆ ರವಾನಿಸಲು ಸಹಾಯವಾಗುವಂತೆ ರಾಜ್ಯದ 169 ತಾಲ್ಲೂಕುಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದೆ. ಸದರಿ ಕೇಂದ್ರಗಳಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮೂಲಕ ನೇಮಕಗೊಂಡ ಕಾರ್ಮಿಕ ಬಂಧುಗಳು ಕಾರ್ಯನಿರ್ವಹಿಸುತ್ತಿದ್ದಾರೆ.

**3. (ಅ) ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್‌ಧನ್ ಯೋಜನೆ (ಪಿಎಂ-ಎಸ್‌ವೈಎಂ):-** ಕೇಂದ್ರ ಸರ್ಕಾರದ ಈ ಯೋಜನೆಯಡಿ 18 – 40 ವರ್ಷ ವಯೋಮಾನದ ಅಸಂಘಟಿತ ಕಾರ್ಮಿಕರು ನೊಂದಾಯಿಸಿಕೊಂಡು 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ.3,000/- ಗಳ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಮಾಸಿಕ ತಲಾ ರೂ. 55/- ರಿಂದ ರೂ. 200/- ರವರೆಗೆ ಕೇಂದ್ರ ಸರ್ಕಾರವು ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ.

**(ಆ) ನ್ಯೂ ಪೆನ್ಷನ್ ಸ್ಕೀಮ್ ಫಾರ್ ಟ್ರೇಡರ್ಸ್ ಅಂಡ್ ಸೆಲ್ಫ್ ಎಂಪ್ಲಾಯ್ಡ್ ಪರ್ಸನ್ಸ್:-**

ಈ ಯೋಜನೆಯಡಿ ಅಂಗಡಿ ಮಾಲೀಕರು, ಚಿಲ್ಲರೆ ವ್ಯಾಪಾರಿಗಳು, ಅಕ್ಕಿ ಗಿರಣಿ ಮಾಲೀಕರು, ಎಣ್ಣೆ ಗಿರಣಿ ಮಾಲೀಕರು, ವರ್ಕ್‌ಶಾಪ್ ಮಾಲೀಕರು, ಕಮಿಷನ್ ಏಜೆಂಟ್ಸ್, ರಿಯಲ್ ಎಸ್ಟೇಟ್‌ನ ಬ್ರೋಕರ್ಸ್, ಸಣ್ಣ ಹೋಟೆಲ್ ಹಾಗೂ ರೆಸ್ಟೋರೆಂಟ್‌ನ ಮಾಲೀಕರು ಹಾಗೂ ಅಂತಹ ಇತರೆ ಸಣ್ಣ ವ್ಯಾಪಾರಗಳಲ್ಲಿ ತೊಡಗಿಸಿಕೊಂಡ ವ್ಯಾಪಾರಿಗಳು/ಲಘು ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳು ಫಲಾನುಭವಿಗಳಾಗುತ್ತಾರೆ.

| | | |
|---|---|---|
| | | ಸಂಘಟಿತ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರವು ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯನ್ನು ರಚಿಸಿದ್ದು, ಸದರಿ ಮಂಡಳಿಗೆ ವಂತಿಗೆ ಪಾವತಿ ಮಾಡುವ ವಿವಿಧ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಈ ಕೆಳಕಂಡ ಯೋಜನೆಗಳು ಜಾರಿಯಲ್ಲಿರುತ್ತವೆ.<br>**1. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**<br>**2. ವೈದ್ಯಕೀಯ ನೆರವು.**<br>**3. ಅಪಘಾತ ಧನ ಸಹಾಯ.**<br>**4. ಮೃತ ಕಾರ್ಮಿಕರ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ.**<br>**5. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರಕ್ಕೆ ಧನ ಸಹಾಯ.**<br>**6. ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ಕಾರ್ಮಿಕ ಸಂಘಟನೆಗೆ ಧನ ಸಹಾಯ.** |
| ಆ) | ಇದುವರೆಗೂ ಯಾವ ಯಾವ ರೀತಿಯ ಕಾರ್ಮಿಕರನ್ನು ಗುರುತಿಸಲಾಗಿದೆ; ಈ ರೀತಿಯ ಎಷ್ಟು ಜನ ಕಾರ್ಮಿಕರಿದ್ದಾರೆ; (ಸಂಘಟಿತ ಮತ್ತು ಅಸಂಘಟಿತ ಪ್ರತ್ಯೇಕವಾಗಿ ವಿವರ ನೀಡುವುದು) | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಅಸಂಘಟಿತ ವಲಯದ ಕಾರ್ಮಿಕರ ಪೈಕಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಸಹ ಒಬ್ಬರಾಗಿರುತ್ತಾರೆ. ಇದುವರೆಗೂ 28.89 ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಗುರುತಿಸಿ ನೋಂದಣಿ ಮಾಡಲಾಗಿರುತ್ತದೆ.<br>ಕರ್ನಾಟಕ ರಾಜ್ಯ ಸರ್ಕಾರವು 43 ವರ್ಗಗಳ ಕಾರ್ಮಿಕರನ್ನು ಅಸಂಘಟಿತ ವಲಯದ ಕಾರ್ಮಿಕರೆಂದು ಗುರುತಿಸಲಾಗಿದೆ. ವಿವರಗಳನ್ನು <u>ಅನುಬಂಧ-2</u>ರಲ್ಲಿ ಲಗತ್ತಿಸಿದೆ.<br>ಅಸಂಘಟಿತ ವಲಯದ ಕಾರ್ಮಿಕರ ಬಗ್ಗೆ ಈವರೆಗೆ ಯಾವುದೇ ಸಮೀಕ್ಷೆಗಳಾಗಲೀ, ಗಣತಿಗಳಾಗಲೀ ನಡೆದಿರುವುದಿಲ್ಲ. ಆದ್ದರಿಂದ, ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ ನಿಖರ ಮಾಹಿತಿ ಲಭ್ಯವಿರುವುದಿಲ್ಲ. ಆದರೂ ಸಹ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ನೊಂದಾಯಿಸಲ್ಪಟ್ಟ ಕಾರ್ಮಿಕರ ವಿವರ ಈ ಕೆಳಕಂಡಂತಿದೆ.<br>**(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**<br>ಈ ಯೋಜನೆಯಡಿ ಸಾರಿಗೆ ಇಲಾಖೆಯಿಂದ ವಾಣಿಜ್ಯ ಸಾರಿಗೆ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿ ಹೊಂದಿದ ಎಲ್ಲಾ ಚಾಲಕರನ್ನು ಫಲಾನುಭವಿಯಾಗಿ ಪರಿಗಣಿಸಲಾಗಿದ್ದು, ಸಾರಿಗೆ ಇಲಾಖೆಯ ಮಾಹಿತಿ ಪ್ರಕಾರ ಅವರಲ್ಲಿ ಒಟ್ಟು **8,40,561** ನೊಂದಾಯಿತ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿದ್ದು, ಎಲ್ಲರನ್ನು ಯೋಜನೆಯ ವ್ಯಾಪ್ತಿಗೆ ತರಲಾಗಿದೆ. |

| | | |
|---|---|---|
| | | **(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ" ವರ್ಗಗಳ ಕಾರ್ಮಿಕರನ್ನು ನೊಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದ್ದು, ಈವರೆಗೆ 1,52,224 ಅರ್ಜಿಗಳನ್ನು ಸ್ವೀಕರಿಸಲಾಗಿದೆ.<br><br>(3) **ಅಗಸರು ಹಾಗೂ ಕ್ಷೌರಿಕ ವೃತ್ತಿಯ ಕಾರ್ಮಿಕರು:-** ಸನ್ಮಾನ್ಯ ಮುಖ್ಯಮಂತ್ರಿಯವರು ಕೋವಿಡ್-19ರ ಲಾಕ್‌ಡೌನ್ ಕಾರಣ ಅಗಸರು ಹಾಗೂ ಕ್ಷೌರಿಕ ವೃತ್ತಿಯ ಕಾರ್ಮಿಕರಿಗೆ ಘೋಷಿಸಿದ ವಿಶೇಷ ಪ್ಯಾಕೇಜ್ ಅಡಿ ಪರಿಹಾರ ಕೋರಿ 73,646 ಅಗಸರು ಹಾಗೂ 66,068 ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ ಒಟ್ಟು 1,39,714 ಕಾರ್ಮಿಕರು ಅರ್ಜಿ ಸಲ್ಲಿಸಿರುತ್ತಾರೆ.<br><br>**(4) ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ದನ್ (PMSYM) ಯೋಜನೆ:-**<br>ಕೇಂದ್ರ ಸರ್ಕಾರದ ಈ ಯೋಜನೆಯಡಿ ಈವರೆಗೆ 98220 ಅಸಂಘಟಿತ ಕಾರ್ಮಿಕರನ್ನು ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ ನೋಂದಾಯಿಸಿ ಪಿಂಚಣಿ ಕಾರ್ಡ್ ವಿತರಿಸಲಾಗಿದೆ.<br><br>ಇದುವರೆಗೂ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ 20:40ರ ಅನುಪಾತದಲ್ಲಿ ವಂತಿಗೆ ಪಾವತಿಸುವ ವಿವಿಧ ಸಂಸ್ಥೆಗಳು/ಕಾರ್ಖಾನೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರನ್ನು ಗುರುತಿಸಲಾಗಿದೆ. ಕಾರ್ಮಿಕ ಕಲ್ಯಾಣ ಮಂಡಳಿಯ ವ್ಯಾಪ್ತಿಗೆ 41.31 ಲಕ್ಷ ಸಂಘಟಿತ ಕಾರ್ಮಿಕರು ಒಳಪಡುತ್ತಾರೆ. |
| ಇ) | ಈ ರೀತಿ ಗುರುತಿಸಲಾದ ಕಾರ್ಮಿಕರಿಗೆ ಸರ್ಕಾರವು ರೂಪಿಸಿರುವ ಯೋಜನೆ/ ಕಾರ್ಯಕ್ರಮಗಳನ್ನು ಸಕಾಲದಲ್ಲಿ ಅನುಷ್ಠಾನಗೊಳಿಸಲು ಅನುಸರಿಸುತ್ತಿರುವ ಕ್ರಮಗಳೇನು; (ವಿವರ ನೀಡುವುದು) | 1. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಟ್ಟಡ ಕಾರ್ಮಿಕರಿಗೆ ಸರ್ಕಾರವು ರೂಪಿಸಿರುವ ಯೋಜನೆ / ಕಾರ್ಯಕ್ರಮಗಳನ್ನು ಸಕಾಲದಲ್ಲಿ ಅನುಷ್ಠಾನಗೊಳಿಸಲು ಮಂಡಳಿ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿದೆ:<br>• ಆನ್‌ಲೈನ್ ಮೂಲಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ನೋಂದಾಯಿಸುವ ಹಾಗು ಸೌಲಭ್ಯಗಳನ್ನು ಪಡೆಯುವ ಪ್ರಕ್ರಿಯೆ ಜಾರಿಯಲ್ಲಿದ್ದು, ಪ್ರಸ್ತುತ ಇದನ್ನು ಕಾರ್ಮಿಕ ನಿರೀಕ್ಷಕರುಗಳ ಕಛೇರಿಗಳು / ಸೇವಾ ಸಿಂಧು ಕೇಂದ್ರಗಳು (Common Service Centre-CSC)/ ಸ್ವತಃ ಕಾರ್ಮಿಕರೇ ನೋಂದಾಯಿಸಿಕೊಳ್ಳಲು ಹಾಗು ಸೌಲಭ್ಯಗಳಿಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.<br>• ಮಂಡಳಿಯ ಫಲಾನುಭವಿಗಳ ನೋಂದಣಿ, ನವೀಕರಣ ಮತ್ತು ಸೌಲಭ್ಯಗಳನ್ನು ಪಡೆಯಲು ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಆದಾರ್ ಲಿಂಕ್ ಮಾಡಲಾಗಿದ್ದು ಈ |

ಮೂಲಕ ದುರುಪಯೋಗವಾಗುವುದನ್ನು ತಡೆಯಲಾಗಿರುತ್ತದೆ.

- ಮಂಡಳಿಯ ಸೌಲಭ್ಯಗಳನ್ನು ಫಲಾನುಭವಿಗಳಿಗೆ ಸಕಾಲದಲ್ಲಿ ದೊರಕಿಸುವ ಹಿತದೃಷ್ಠಿಯಿಂದ ಮಂಜೂರಾತಿ ಅಧಿಕಾರವನ್ನು ವಿಭಾಗ / ಉಪ ವಿಭಾಗ ಮಟ್ಟದ ಅಧಿಕಾರಿಗಳಿಗೆ ನೀಡಿ ವಿಕೇಂದ್ರಿಕರಿಸಲಾಗಿರುತ್ತದೆ.
- ಮಂಡಳಿಯ ಫಲಾನುಭವಿಗಳ ನೋಂದಣಿ, ನವೀಕರಣ ಮತ್ತು ಸೌಲಭ್ಯಗಳ ವಿತರಣೆಯನ್ನು ಸಕಾಲ ಯೋಜನಾ ವ್ಯಾಪ್ತಿಗೆ ತಂದು ಕಾಲಮಿತಿಯಲ್ಲಿ ವಿಲೇವಾರಿ ಮಾಡಲು ಕ್ರಮಕೈಗೊಳ್ಳಲಾಗಿರುತ್ತದೆ.
- ಮಂಡಳಿಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಗುರುತಿಸಿ ನೋಂದಣಿ ಮಾಡಿಸಲು, ಕಾನೂನು ಅರಿವು ಮೂಡಿಸಲು ಹಾಗು ಮಂಡಳಿಯ ಸೌಲಭ್ಯಗಳನ್ನು ಫಲಾನುಭವಿಗಳಿಗೆ ತಲುಪಿಸುವ ಸದುದ್ದೇಶದಿಂದ ಸಾಕಷ್ಟು ಪ್ರಚಾರವನ್ನು ಮಾಡಿ ಅನರ್ಹ ಕಾರ್ಮಿಕರು ನೋಂದಣಿಯಾಗಿ ಸೌಲಭ್ಯವನ್ನು ಪಡೆದುಕೊಂಡಿದ್ದು ಕಂಡು ಬಂದಲ್ಲಿ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆಯನ್ನು ನೀಡಲಾಗಿರುತ್ತದೆ.
- ನೋಂದಣಿ ಮತ್ತು ಸೌಲಭ್ಯದ ಅರ್ಜಿಗಳ ಹೆಚ್ಚು ಬಾಕಿ ಇರುವ ಕಛೇರಿಗಳ ಮಾಹಿತಿಯನ್ನು ಕಾಲಕಾಲಕ್ಕೆ ಪಡೆದು ಮಂಡಳಿಯಿಂದ ಅಧಿಕಾರಿಗಳ ತಂಡ ರಚನೆ ಮಾಡಿ ವಿಲೇವಾರಿಗಾಗಿ ಕಳುಹಿಸಲಾಗಿರುತ್ತದೆ.
- ನೋಂದಣಿ ಮತ್ತು ಸೌಲಭ್ಯದ ಅರ್ಜಿಗಳ ಹೆಚ್ಚು ಬಾಕಿ ಇರುವ ಕಛೇರಿಗಳ ಪ್ರಗತಿ ಪರಿಶೀಲನೆ ಬಗ್ಗೆ ವಿಡಿಯೋ ಕಾನ್ಫರೆನ್ಸ್ ಸಭೆಗಳನ್ನು ನಡೆಸುವ ಮೂಲಕ ಅಗತ್ಯ ಮಾರ್ಗದರ್ಶನಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ನೀಡಲಾಗುತ್ತಿರುತ್ತದೆ.
- ಹೆಚ್ಚು ಅರ್ಜಿಗಳು ಸ್ವೀಕೃತಗೊಳ್ಳುವ ಕಛೇರಿಗಳಿಗೆ ಹೆಚ್ಚುವರಿ ಮಾನವ ಸಂಪನ್ಮೂಲವನ್ನು ಮಂಡಳಿಯಿಂದ ಒದಗಿಸಿ ಶೀಘ್ರದಲ್ಲಿ ಅರ್ಜಿಗಳ ವಿಲೇವಾರಿಗಾಗಿ ಕ್ರಮಕೈಗೊಳ್ಳಲಾಗಿರುತ್ತದೆ.

**2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿ ಕಾರ್ಮಿಕರಿಗೆ ಸೌಲಭ್ಯಗಳನ್ನು ಸಕಾಲದಲ್ಲಿ ಒದಗಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:**

- **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ** ಅರ್ಜಿದಾರರು ಪರಿಹಾರ ಕೋರಿ ಸಲ್ಲಿಸಿದ ಅರ್ಜಿ ಹಾಗೂ ದಾಖಲೆಗಳನ್ನು ತಕ್ಷಣವೇ ಸಂಬಂಧಪಟ್ಟ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಪರಿಶೀಲನೆಗಾಗಿ ಕಳುಹಿಸಲಾಗುತ್ತಿದೆ.

| | | |
|---|---|---|
| | | • ಪರಿಶೀಲನೆಗೊಂಡ ಅರ್ಜಿಗಳಿಗೆ ಸಂಬಂಧಿಸಿದಂತೆ, ಶೀಘ್ರದಲ್ಲೇ ನಿಗದಿತ ಪರಿಹಾರವನ್ನು ಅರ್ಜಿದಾರರಿಗೆ ಡಿಬಿಟಿ ಮೂಲಕ ವರ್ಗಾಯಿಸಲಾಗುತ್ತಿದೆ.<br>• ಮೇಲ್ಕಂಡ ಯೋಜನೆಯಡಿ ಶೈಕ್ಷಣಿಕ ಧನ ಸಹಾಯಕ್ಕಾಗಿ ಸಲ್ಲಿಸಿದ ಅರ್ಜಿಗಳನ್ನು ತಕ್ಷಣವೇ ಸಂಬಂಧಪಟ್ಟ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಪರಿಶೀಲನೆಗಾಗಿ ಕಳುಹಿಸಲಾಗುತ್ತಿದೆ.<br>• ಪರಿಶೀಲನೆಗೊಂಡ ಅರ್ಜಿಗಳಿಗೆ ಸಂಬಂಧಿಸಿದಂತೆ, ಶೀಘ್ರದಲ್ಲೇ ನಿಗದಿತ ಶೈಕ್ಷಣಿಕ ಧನ ಸಹಾಯವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ವರ್ಗಾಯಿಸಲಾಗುತ್ತಿದೆ.<br>• **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ** ಯೋಜನೆಯಡಿ ಪ್ರಸ್ತುತ 11 ಅಸಂಘಟಿತ ವರ್ಗಗಳಾದ **"ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"**ರನ್ನು ನೋಂದಾಯಿಸುತ್ತಿದ್ದು, ಗುರುತಿನ ಚೀಟಿಯನ್ನು ವಿತರಿಸುವ ಸಲುವಾಗಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ.<br>• ಅರ್ಜಿದಾರರು ನೋಂದಾಯಿಸಲು ಆನ್‌ಲೈನ್ ಮೂಲಕ ನಿಗದಿತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.<br>• ಸಲ್ಲಿಸಿದ ಅರ್ಜಿಗಳನ್ನು ಸಂಬಂಧಪಟ್ಟ ಪ್ರಾಧಿಕಾರಿಗಳು ಆನ್‌ಲೈನ್ ಮೂಲಕವೇ ಅನುಮೋದಿಸಲು ಅವಕಾಶ ಕಲ್ಪಿಸಿದೆ.<br>• ಅನುಮೋದನೆಗೊಂಡ ತಕ್ಷಣವೇ ನೋಂದಣಿಯ ಗುರುತಿನ ಚೀಟಿಯನ್ನು ವಿತರಿಸಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳ ಪ್ರಚಾರಕ್ಕಾಗಿ ಸಂವಹನ ಚಟುವಟಿಕೆಗಳನ್ನು ಕೈಗೊಳ್ಳಲಾಗಿದ್ದು, ಯೋಜನೆಯ ಕುರಿತು ಫಲಾನುಭವಿಗಳಿಗೆ ಮಾಹಿತಿ ನೀಡಲು ಯೋಜನೆಯ ವಿವರಗಳ ಕರಪತ್ರಗಳನ್ನು ಮುದ್ರಿಸಿ, ಸಂಬಂಧಪಟ್ಟ ಕಾರ್ಮಿಕರ ಸಂಘಗಳು, ಸಂಘಟನೆಗಳು ಹಾಗೂ ಕಾರ್ಮಿಕ ಇಲಾಖೆಗಳ ಅಧಿಕಾರಿಗಳಿಗೆ ವಿತರಿಸಲಾಗಿದೆ.<br>ರಾಜ್ಯದಾದ್ಯಂತ 169 ತಾಲ್ಲೂಕುಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದ್ದು, ಅಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕ ಬಂಧುಗಳು ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಕುರಿತು ಮಾಹಿತಿ, ಯೋಜನೆಯಡಿ ದೊರಕುವ ಸೌಲಭ್ಯಗಳನ್ನು ಪಡೆಯಲು ಸಹಾಯ ನೀಡುತ್ತಾರೆ. ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಪ್ರಮುಖ ಪತ್ರಿಕೆಗಳಲ್ಲಿ ಕಾಲಕಾಲಕ್ಕೆ ಜಾಹೀರಾತು ನೀಡಲಾಗಿದೆ. |

| | | |
|---|---|---|
| | | 3. ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕಲ್ಯಾಣ ಯೋಜನೆಗಳ ಸೌಲಭ್ಯಗಳನ್ನು ಸಕಾಲದಲ್ಲಿ ಅನುಷ್ಠಾನಗೊಳಿಸಿ ಫಲಾನುಭವಿಗಳ ಉಳಿತಾಯ ಖಾತೆಗೆ ಆರ್.ಟಿ.ಜಿ.ಎಸ್ ಮೂಲಕ ನೇರವಾಗಿ ಜಮಾ ಮಾಡಲಾಗುತ್ತಿದೆ. |
| ಈ) | ಇಲಾಖಾವತಿಯಿಂದ ಈ ತಹಲ್‌ವರೆಗೂ ನೋಂದಣಿ ಮಾಡಿಕೊಂಡಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು; | 1. ಕಾರ್ಮಿಕ ಕಲ್ಯಾಣ ಮಂಡಳಿಗೆ ಯಾವುದೇ ನೊಂದಣಿ ಸೌಲಭ್ಯ ಇರುವುದಿಲ್ಲ. ಪ್ರಸ್ತುತ 41.31 ಲಕ್ಷ ಸಂಘಟಿತ ಕಾರ್ಮಿಕರು ಮಂಡಳಿಯ ವ್ಯಾಪ್ತಿಗೆ ಒಳಪಡುತ್ತಾರೆ.<br><br>2. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಡಿಸೆಂಬರ್–2020 ರವರೆಗೆ 28.89 ಲಕ್ಷ ಕಾರ್ಮಿಕರನ್ನು ನೋಂದಾಯಿಸಿಕೊಳ್ಳಲಾಗಿರುತ್ತದೆ.<br><br>3. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ 8,40,561 ಖಾಸಗಿ ವಾಣಿಜ್ಯ ಕಾರ್ಮಿಕರನ್ನು ನೋಂದಾಯಿಸಲಾಗಿದೆ ಹಾಗೂಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 1,52,224 ನೋಂದಾಯಿಸಲಾಗಿದೆ. |
| ಉ) | ಇಂತಹ ಕಾರ್ಮಿಕರಿಗೆ ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು ನೀಡುವುದು; (ಕಟ್ಟಡ ಕಾರ್ಮಿಕರನ್ನು ಒಳಗೊಂಡಂತೆ) | 1. ಕಟ್ಟಡ ಮತ್ತು ಇತರೆ ನಿರ್ಮಾಣ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು 2006 ರಡಿಯಲ್ಲಿ ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗಾಗಿ ರೂಪಿತವಾದ 19 ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಮಂಡಳಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸೌಲಭ್ಯಗಳ ವಿವರಗಳನ್ನು ಈ ಮೇಲೆ ತಿಳಿಸಿದಂತೆ **ಅನುಬಂಧ–1** ರಲ್ಲಿ ಒದಗಿಸಿದೆ.<br><br>2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ನೀಡುತ್ತಿರುವ ಸೌಲಭ್ಯಗಳು ಈ ಕೆಳಗಿನಂತಿವೆ.<br><br>**ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:–**<br><br>(ಅ) **ಅಪಘಾತ ಪರಿಹಾರ ಸೌಲಭ್ಯ :**<br>• ಅಪಘಾತದಿಂದಾದ ಮರಣ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ,<br>• ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷದವರೆಗೆ ಪರಿಹಾರ<br>• ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ಫಲಾನುಭವಿಗೆ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುವುದು. |

| | | |
|---|---|---|
| | | (ಆ) **ಶೈಕ್ಷಣಿಕ ಧನ ಸಹಾಯ :** ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br>(ಇ) **ಸ್ಮಾರ್ಟ್ ಕಾರ್ಡ್ ಸೌಲಭ್ಯ :** ಯೋಜನೆಯ ಕುರಿತು ಫಲಾನುಭವಿಗಳಲ್ಲಿ ಜಾಗೃತಿ ಮೂಡಿಸಲು ಎಲ್ಲಾ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.<br><br>**<u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u>**<br><br>(ಅ) **"ಸ್ಮಾರ್ಟ್ ಕಾರ್ಡ್":-** ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.<br><br>3. ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಸಂಘಟಿತ ಕಾರ್ಮಿಕರಿಗೆ ನೀಡಲಾಗುತ್ತಿರುವ ಯೋಜನೆಗಳನ್ನು **<u>ಅನುಬಂಧ-3</u>** ರಲ್ಲಿ ನೀಡಲಾಗುತ್ತಿದೆ. |
| ಊ) | ಕಳೆದ 3 ವರ್ಷಗಳಲ್ಲಿ ಇಲಾಖೆಗೆ ಸರ್ಕಾರದದಿಂದ ಬಿಡುಗಡೆಯಾದ ಅನುದಾನ ಎಷ್ಟು; ಇದನ್ನು ಯಾವ ಯಾವ ಉದ್ದೇಶಗಳಿಗೆ ಬಳಕೆ ಮಾಡಲಾಗಿದೆ? (ಉದ್ದೇಶವಾರು ವಿವರ ನೀಡುವುದು) | ಕಳೆದ ಮೂರು ವರ್ಷಗಳ ಆಯವ್ಯಯಗಳಲ್ಲಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಯೋಜನೆಗಳಿಗೆ ಒದಗಿಸಿದ ಅನುದಾನ ಹಾಗೂ ಖರ್ಚಿನ ವಿವರವನ್ನು **<u>ಅನುಬಂಧ-4</u>** ರಲ್ಲಿ ಒದಗಿಸಿದೆ.<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಹಾಗೂ ಕರ್ನಾಟಕ ಕಾರ್ಮಿಕರ ಕಲ್ಯಾಣ ಮಂಡಳಿಗೆ ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |

**ಕಾಇ 24 ಎಲ್‌ಇಟಿ 2021**

*(ಅರೆಬೈಲ್ ಶಿವರಾಂ ಹೆಬ್ಬಾರ್)*
**ಕಾರ್ಮಿಕ ಸಚಿವರು**

ವಿಧಾನಸಭೆ ಸದಸ್ಯರಾದ ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 177 ಕ್ಕೆ

## ಅನುಬಂಧ-1

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ** ಮಾಸಿಕ **ರೂ.2,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ.
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಬಿತರಿಗೆ
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ **ರೂ.20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | ವಾರ್ಷಿಕ ಸಹಾಯ ಧನ | |
|---|---|---|---|
| | | ಗಂಡು | ಹೆಣ್ಣು |
| I. | ನರ್ಸರಿ | 3,000 | 4,000 |
| II. | 1 ರಿಂದ 4ನೇ ತರಗತಿ | 3,000 | 4,000 |
| III. | 5 ರಿಂದ 8ನೇ ತರಗತಿ | 5,000 | 6,000 |
| IV. | 9 ಹಾಗೂ 10ನೇ ತರಗತಿ | 10,000 | 11,000 |
| V. | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 10,000 | 14,000 |
| VI. | ಐಟಿಐ | 12,000 | 15,000 |
| VII. | ಪದವಿ ಪ್ರತಿ ವರ್ಷಕ್ಕೆ | 15,000 | 20,000 |
| VIII. | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 20,000 | 20,000 |
| | ಮತ್ತು ಪ್ರತಿ ವರ್ಷಕ್ಕೆ | 20,000 | 25,000 |
| IX. | ಇಂಜಿನಿಯರಿಂಗ್ ಕೋರ್ಸ್ ಬಿಇ/ ಬಿ.ಟೆಕ್ ಸೇರ್ಪಡೆಗೆ | 25,000 | 25,000 |
| | ಮತ್ತು ಪ್ರತಿ ವರ್ಷಕ್ಕೆ | 25,000 | 30,000 |
| X. | ವೈದ್ಯಕೀಯ ಕೋರ್ಸ್‌ಗೆ ಸೇರ್ಪಡೆಗೆ | 30,000 | 30,000 |
| | ಮತ್ತು ಪ್ರತಿ ವರ್ಷಕ್ಕೆ | 40,000 | 50,000 |
| XI. | ಡಿಪ್ಲೋಮಾ | 15,000 | 20,000 |
| XII. | ಎಂ.ಟೆಕ್ / ಎಂ.ಇ | 30,000 | 35,000 |
| XIII. | ಎಂ.ಡಿ (ವೈದ್ಯಕೀಯ) | 45,000 | 55,000 |
| XIV. | ಪಿಹೆಚ್‌ಡಿ (ಪ್ರತಿ ವರ್ಷಕ್ಕೆ) ಗರಿಷ್ಠ 03 ವರ್ಷ | 25,000 | 30,000 |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ **ರೂ.300/-** ರಿಂದ **ರೂ.10,000/-ವರೆಗೆ**
13. **ಅಪಘಾತ ಪರಿಹಾರ**: ಮರಣ ಹೊಂದಿದ್ದಲ್ಲಿ **ರೂ.5,00,000/-**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ)**: ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ರಾಜ್ಯಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯಧನ.

**ವಿಧಾನಸಭೆ ಸದಸ್ಯರಾದ ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 177 ಕ್ಕೆ**

**ಅನುಬಂಧ–2**

1. ದರ್ಜಿಗಳು
2. ದೋಬಿಗಳು
3. ಹಮಾಲಿಗಳು
4. ಹೋಟೆಲ್ ಕಾರ್ಮಿಕರು
5. ಆಟೋ ಮತ್ತು ಟ್ಯಾಕ್ಸಿ ಚಾಲಕರು ಹಾಗೂ ಖಾಸಗಿ ಬಸ್, ಲಾರಿ ಚಾಲಕರು ಹಾಗೂ ನಿರ್ವಾಹಕರು
6. ಆಟೋಮೊಬೈಲ್ ವರ್ಕ್‌ಶಾಪ್‌ಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ಮತ್ತು
7. ಗೃಹ ಕಾರ್ಮಿಕರು
8. ಕೃಷಿ/ತೋಟಗಾರಿಕೆ/ಹೈನುಗಾರಿಕೆ ಕೆಲಸಗಳಲ್ಲಿ ತೊಡಗಿರುವ ಕೂಲಿ ಕಾರ್ಮಿಕರು
9. ನಾರಿನ ಉದ್ದಿಮೆಯಲ್ಲಿ ತೊಡಗಿರುವ ಕೂಲಿ ಕಾರ್ಮಿಕರು
10. ಮನೆಗಳಲ್ಲಿ ನೇಯ್ಗೆ ಕೆಲಸ ಮಾಡುವ ನೇಕಾರರು
11. ಮೀನುಗಾರರು
12. ಕುಂಬಾರರು
13. ಚಮ್ಮಾರರು
14. ಕ್ಷೌರಿಕರು
15. ಕಸಾಯಿ ಖಾನೆ ಕಾರ್ಮಿಕರು
16. ಕಮ್ಮಾರರು
17. ಚಿನಿವಾರರು/ಅಕ್ಕಸಾಲಿಗರು
18. ಮನೆಗಳಲ್ಲಿ ಬೀಡಿ ಕಟ್ಟುವವರು
19. ಮನೆಗಳಲ್ಲಿ ಅಗರಬತ್ತಿ ತಯಾರಿಸುವ ಕಾರ್ಮಿಕರು
20. ಶಿಲ್ಪಕಾರರು/ ಹಸ್ತ ಕುಶಲ ಕಾರ್ಮಿಕರು
21. ಚಿತ್ರ ಬಿಡಿಸುವವರು
22. ಬಿದಿರಿನ ವಸ್ತುಗಳನ್ನು ತಯಾರು ಮಾಡುವವರು
23. ಖಾದ್ಯ ತೈಲ/ಮನೆಯಲ್ಲಿ ಆಹಾರ ವಸ್ತುಗಳ ಸಂಸ್ಕರಣೆ ಕೆಲಸದಲ್ಲಿ ತೊಡಗಿರುವವರು.
24. ಟಿಂಬರ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
25. ರೇಷ್ಮೆ ಕಾರ್ಮಿಕರು
26. ಕಾಟನ್ ಗಿನ್ನಿಂಗ್ ಮತ್ತು ಪ್ರೊಸೆಸಿಂಗ್ ಕೆಲಸದಲ್ಲಿ ತೊಡಗಿರುವಕಾರ್ಮಿಕರು
27. ಮುದ್ರಣ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
28. ಕಲ್ಲು ಒಡೆಯುವಕಾರ್ಮಿಕರು
29. ಚರ್ಮ ಹದ ಮಾಡುವ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
30. ಎಲ್ಲಾ ವಿಧದ ಮಿಲ್‌ಗಳಲ್ಲಿ ಕೆಲಸ ಮಾಡುವ ಕಾರ್ಮಿಕರು
31. ಬೀದಿ ಬದಿಯ ಮಾರಾಟಗಾರರು
32. ಚಾಲಕರು/ನಿರ್ವಾಹಕರು/ಸಹಾಯಕರು/ ಕ್ಲೀನರ್‌ಗಳು/ಗಾಡಿ ಎಳೆಯುವವರು/ರಿಕ್ಷಾ ವಾಲಾಗಳು/ ಟಾಂಗಾವಾಲಾಗಳು.
33. ಎಲ್ಲಾ ಬಗೆಯ ರಿಪೇರಿ ಕೆಲಸ ಮತ್ತು ತ್ಯಾಜ್ಯ ವಿಲೇವಾರಿ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
34. ಚಿಂದಿ ಆಯುವವರು
35. ಅಡಿಗೆ ಕೆಲಸಗಾರರು/ಕಲ್ಯಾಣ ಮಂಟಪಗಳಲ್ಲಿ ಶುಚಿ ಕೆಲಸದಲ್ಲಿ ತೊಡಗಿರುವವರು/ಮಧ್ಯಾಹ್ನದ ಬಿಸಿ ಊಟದ ಕಾರ್ಮಿಕರು ಮತ್ತು ಸಹಾಯಕರು
36. ಸಫಾಯಿ ಕರ್ಮಚಾರಿಗಳು
37. ಕಛೇರಿಗಳಲ್ಲಿ ಶುಚಿ ಕೆಲಸದಲ್ಲಿ ತೊಡಗಿರುವ ಗುತ್ತಿಗೆ ಕಾರ್ಮಿಕರು

38. ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ಭದ್ರತಾ ಸಿಬ್ಬಂದಿ/ವಾಚ್‌ಮೆನ್‌ಗಳು
39. ಪೋರ್ಟರ್
40. ಪ್ರವಾಸಿ ಗೈಡ್‌ಗಳು
41. ಮಂಡಕ್ಕಿ ಭಟ್ಟಿ ಕಾರ್ಮಿಕರು
42. ಛಾಯಾವೃತ್ತಿ ಕಾರ್ಮಿಕರು
43. ಇತರೆ ವರ್ಗ(ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 2(m) ಹಾಗೂ ಕಲಂ 2(l) ರ ವ್ಯಾಖ್ಯಾನಕ್ಕೆ ಒಳಪಡುವ ಅಸಂಘಟಿತ ವರ್ಗದ ಎಲ್ಲಾ ಕಾರ್ಮಿಕರು)

**ವಿಧಾನಸಭೆ ಸದಸ್ಯರಾದ ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 177 ಕ್ಕೆ**

## ಅನುಬಂಧ-3

## ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಸಂಘಟಿತ ಕಾರ್ಮಿಕರಿಗೆ ನೀಡಲಾಗುತ್ತಿರುವ ಯೋಜನೆಗಳು

1. **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ: ಪ್ರೌಢ ಶಾಲೆ,** (8 ರಿಂದ 10ನೇ ತರಗತಿವರೆಗೆ) ರೂ.3,000/ ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಇತ್ಯಾದಿ ರೂ.4,000/-ಪದವಿ ತರಗತಿಗೆ ರೂ.5,000/ ಸ್ನಾತಕೋತ್ತರ ಪದವಿ ತರಗತಿಗಳಿಗೆ ರೂ.6,000/- ಇಂಜನೀಯರಿಂಗ್/ವೈದ್ಯಕೀಯ ರೂ.10,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು. **(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗ ಶೇ.50 ಪ.ಜಾ / ಪ.ಪಂ ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು)**

2. **ಕಾರ್ಮಿಕರಿಗೆ ವೈದ್ಯಕೀಯ ನೆರವು :** ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಆರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ **ರೂ. 1,000/-**ದಿಂದ ಗರಿಷ್ಠ **ರೂ.10,000/-** ವರೆಗೆ ಮತ್ತು ಆರೋಗ್ಯ ತಪಾಸಣೆಗೆ **ರೂ. 500/-**ರಿಂದ **ರೂ. 1000/-**ವರೆಗೆ ಧನ ಸಹಾಯ ನೀಡಲಾಗುವುದು.

3. **ಕಾರ್ಮಿಕರ ಅಪಘಾತ ಧನ ಸಹಾಯ :** ಕಾರ್ಮಿಕರಿಗೆ ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಕನಿಷ್ಠ **ರೂ. 1,000/-** ಗರಿಷ್ಠ **ರೂ 3,000/-** ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4 **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ :**ಈ ಯೋಜನೆಯ ಸೌಲಭ್ಯ ಪಡೆಯಬೇಕಾದರೆ ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತ ಪಟ್ಟ ಆರು ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, **ರೂ.5,000/-** ಧನ ಸಹಾಯ ನೀಡಲಾಗುವುದು.

5. **ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ :** ನೊಂದಾಯಿತ ಕಾರ್ಮಿಕ ಸಂಘಟನೆಗಳು/ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ **ರೂ. 30,000/-** ಧನ ಸಹಾಯ ನೀಡಲಾಗುವುದು. ಒಂದು ಸಂಘಟನೆಗೆ ವರ್ಷದಲ್ಲಿ ಒಂದು ಬಾರಿ ಮಾತ್ರ ಈ ಸೌಲಭ್ಯ ನೀಡಲಾಗುವುದು.

6 **ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ :** ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ **ರೂ. 50,000/-** ಧನ ಸಹಾಯ ನೀಡಲಾಗುವುದು. ವರ್ಷದಲ್ಲಿ ಒಂದು ಸಂಘಟನೆಗೆ ಒಂದು ಬಾರಿ ಮಾತ್ರ ಈ ಸೌಲಭ್ಯ ನೀಡಲಾಗುವುದು.

## ವಿಧಾನಸಭೆ ಸದಸ್ಯರಾದ ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 177 ಕ್ಕೆ

### ಅನುಬಂಧ-4

(ರೂ. ಲಕ್ಷಗಳಲ್ಲಿ)

| ಕ್ರಸಂ | ಯೋಜನೆ | ವರ್ಷ | | | | | |
|---|---|---|---|---|---|---|---|
| | | 2017-18 | | 2018-19 | | 2019-20 | |
| | | ಬಿಡುಗಡೆಯಾದ ಅನುದಾನ | ಖರ್ಚು | ಬಿಡುಗಡೆಯಾದ ಅನುದಾನ | ಖರ್ಚು | ಬಿಡುಗಡೆಯಾದ ಅನುದಾನ | ಖರ್ಚು |
| 1 | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 1750.00 | 1406.35 | 1750.00 | 497.38 | 666.00 | 667.88 |
| 2 | ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆ | 1000.00 | 0.93 | 2083.35 | 638.51 | 901.50 | 616.41 |